# ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ: 1004
ಸದಸ್ಯರ ಹೆಸರು ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ: 22.12.2021
ಉತ್ತರಿಸುವ ಸಚಿವರು: ಲೋಕೋಪಯೋಗಿ ಸಚಿವರು

| ಕ್ರ.ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ರಾಜ್ಯದಲ್ಲಿ ಲೋಕೋಪಯೋಗಿ ಇಲಾಖೆಯಲ್ಲಿನ ಕಾಮಗಾರಿಗಳ ಅಂದಾಜು ವೆಚ್ಚವನ್ನು ತಯಾರಿಸುವಾಗ Schedule of Rate (ದರಗಳ ಪಟ್ಟಿ) ಬೆಲೆಯನ್ನು ಆಧರಿಸಿ ಅಂದಾಜು ವೆಚ್ಚವನ್ನು ನಿಗದಿಪಡಿಸಲಾಗುತ್ತಿದೆಯೇ: | ಹೌದು, ಲೋಕೋಪಯೋಗಿ ಇಲಾಖೆಯಲ್ಲಿ ಕಾಮಗಾರಿಗಳ ಅಂದಾಜು ಪಟ್ಟಿಯನ್ನು ತಯಾರಿಸುವಾಗ ಚಾಲ್ತಿ ದರಪಟ್ಟಿಯಂತೆ (Schedule of Rate) ಬೆಲೆಗಳನ್ನು ಪರಿಗಣಿಸಲಾಗುತ್ತಿದೆ. |
| ಆ) | ಹಾಗಿದ್ದಲ್ಲಿ, ಕೆಲವು ಗುತ್ತಿಗೆದಾರರು ಕೆಲವು ಕಾಮಗಾರಿಗಳನ್ನು ಶೇಕಡ 30% ರವರೆಗೂ ಕಡಿಮೆಗೆ ಬಿಡ್ ಮಾಡುತ್ತಿರುವುದು ನಿಜವೆ: | ಕೆಲವು ಪ್ರಕರಣಗಳಲ್ಲಿ ಗುತ್ತಿಗೆದಾರರು ಶೇಕಡ 30% ರವರೆವಿಗೂ ಕಡಿಮೆ ಬಿಡ್ ಮಾಡಿರುತ್ತಾರೆ. |
| ಇ) | ಹಾಗಿದ್ದಲ್ಲಿ, ಗುತ್ತಿಗೆದಾರರಿಂದ ಗುಣಮಟ್ಟದ ಕಾಮಗಾರಿಗಳನ್ನು ನಿರೀಕ್ಷಿಸಲು ಸಾಧ್ಯವೇ: | ಲೋಕೋಪಯೋಗಿ ಇಲಾಖೆಯಲ್ಲಿ ಕೈಗೊಳ್ಳಲಾಗುವ ಕಾಮಗಾರಿಗಳನ್ನು ಗುಣನಿಯಂತ್ರಣ ಮಾನದಂಡಗಳಿಗನುಸಾರವಾಗಿ ಗುಣಮಟ್ಟ ಪರೀಕ್ಷೆಗೊಳಪಡಿಸಿ ಕಾಮಗಾರಿಯನ್ನು ಸಮರ್ಪಕವಾಗಿ ಉತ್ತಮ ಗುಣ ಮಟ್ಟದೊಂದಿಗೆ ನಿರ್ವಹಿಸಲಾಗುತ್ತದೆ. ಇದಕ್ಕಾಗಿ ಇಲಾಖೆಯಲ್ಲಿ ಮುಖ್ಯ ಇಂಜಿನಿಯರ್ ವೃಂದದ ಅಧಿಕಾರಿಯ ನೇತೃತ್ವದಲ್ಲಿ ಗುಣನಿಯಂತ್ರಣ ವಲಯವನ್ನು ಸ್ಥಾಪಿಸಿ, ಅದರಡಿಯಲ್ಲಿ ಗುಣಭರವಸೆ ವೃತ್ತ, ವಿಭಾಗ ಮತ್ತು ಉಪ ವಿಭಾಗಗಳನ್ನು ಸ್ಥಾಪಿಸಿ, ಇವರ ಮೇಲುಸ್ತುವಾರಿಯಲ್ಲಿ ಕಾಮಗಾರಿಯ ಪ್ರತೀ ಹಂತದಲ್ಲಿಯು ಗುಣಮಟ್ಟವನ್ನು ಕಾಯ್ದುಕೊಳ್ಳುವ ಉದ್ದೇಶದಿಂದ ಪ್ರತೀ ಸಾಮಗ್ರಿಗಳನ್ನು ಪರೀಕ್ಷೆಗೊಳಪಡಿಸಿ, ಗುಣಭರವಸೆ ಅಧಿಕಾರಿಗಳು ನೀಡುವ ವರದಿಯನ್ನು ಆಧಾರಿಸಿ ಗುತ್ತಿಗೆದಾರರಿಗೆ ಅಂತಿಮ ಬಿಲ್ಲನ್ನು ಪಾವತಿಸಲಾಗುತ್ತದೆ. ಮುಂದುವರೆದು, ಕಾಮಗಾರಿ ಮುಗಿದ ನಂತರ ಒಂದು ವರ್ಷಗಳ ಅವಧಿಗೆ ನಿರ್ವಹಣಾ ಅವಧಿ ನಿಗಧಿಗೊಳಿಸಲಾಗಿದ್ದು, ಈ ಅವಧಿಯಲ್ಲಿ ನಿರ್ವಹಿಸಲಾದ ಕಾಮಗಾರಿಯಲ್ಲಿ ಏನಾದರು ನ್ಯೂನ್ಯತೆಗಳು ಕಂಡುಬಂದಲ್ಲಿ, ಸರ್ಕಾರಕ್ಕೆ ಯಾವುದೇ ಆರ್ಥಿಕ ಹೊರೆ ಇಲ್ಲದಂತೆ ಸಂಬಂಧಿಸಿದ ಗುತ್ತಿಗೆದಾರರಿಂದಲೇ ನ್ಯೂನ್ಯತೆಗಳನ್ನು ಸರಿಪಡಿಸಿ ಕ್ರಮವಹಿಸಲಾಗುತ್ತದೆ.<br><br>ರಾಷ್ಟ್ರೀಯ ಹೆದ್ದಾರಿ ವಲಯಕ್ಕೆ ಸಂಬಂಧಿಸಿದ ಕಾಮಗಾರಿಗಳಲ್ಲಿ MORTH ನಿಗಧಿಪಡಿಸಿದ ಗುಣ ನಿಯಂತ್ರಣ ಮಾನದಂಡಗಳಿಗನುಸಾರವಾಗಿ ಗುಣಮಟ್ಟ ಪರೀಕ್ಷೆಗೊಳಪಡಿಸಿ ಕಾಮಗಾರಿಯನ್ನು ಸಮರ್ಪಕವಾಗಿ ಉತ್ತಮ ಗುಣ ಮಟ್ಟದೊಂದಿಗೆ ನಿರ್ವಹಿಸಬೇಕಾಗಿರುತ್ತದೆ. 3 ರಿಂದ 5 ವರ್ಷಗಳ ತನಕ ಹಾಗೂ ಸೇತುವೆ ಕಾಮಗಾರಿಗಳಿಗೆ 10 ವರ್ಷಗಳ ನಿರ್ವಹಣೆ ಅವಧಿಯನ್ನು ನಿಗಧಿಗೊಳಿಸಲಾಗುತ್ತಿದ್ದು, ಈ ಅವಧಿಯಲ್ಲಿ ಕಾಮಗಾರಿಯಲ್ಲಿ ಏನಾದರು ನ್ಯೂನ್ಯತೆಗಳು ಕಂಡುಬಂದಲ್ಲಿ, ಸರ್ಕಾರಕ್ಕೆ ಯಾವುದೇ ಆರ್ಥಿಕ ಹೊರೆ ಇಲ್ಲದಂತೆ ಸಂಬಂಧಿಸಿದ ಗುತ್ತಿಗೆದಾರರಿಂದಲೇ ನ್ಯೂನ್ಯತೆಗಳನ್ನು ಸರಿಪಡಿಸಿ ಕ್ರಮವಹಿಸಲಾಗುತ್ತದೆ. |

| | | |
|---|---|---|
| | | ಸದರಿ ವಲಯ ವ್ಯಾಪ್ತಿಯಲ್ಲಿ ಗುಣಮಟ್ಟದ ಕಾಮಗಾರಿಗಳ ನಿರ್ವಹಣೆಗಾಗಿ ಬೆಂಗಳೂರು, ಚಿತ್ರದುರ್ಗ ಮತ್ತು ಹುಬ್ಬಳ್ಳಿಗಳಲ್ಲಿ ಗುಣನಿಯಂತ್ರಣ ಉಪ ವಿಭಾಗಗಳು ಕಾರ್ಯನಿರ್ವಹಿಸುತ್ತಿದ್ದು, ಐ.ಎಸ್ ಕೋಡ್ ಗಳ ಪ್ರಕಾರ ನಿರ್ಮಾಣ ಸಾಮಗ್ರಿಗಳ ಗುಣಮಟ್ಟದ ತಪಾಸಣೆ / ವಿಶಿಷ್ಟ ವಿವಣೆಯಂತೆ ಕಾರ್ಯವಿಧಾನ ಅನುಸರಿಸುತ್ತಿರುವ ಬಗ್ಗೆ ಪರಿವೀಕ್ಷಣೆ ಕೈಗೊಂಡು, ಎಲ್ಲಾ ಕಾಮಗಾರಿಗಳನ್ನು ಉತ್ತಮ ಗುಣಮಟ್ಟದಿಂದ ನಿರ್ವಹಿಸಲಾಗುತ್ತದೆ. |
| ಈ) | ಹಾಗಿದ್ದಲ್ಲಿ, Schedule of Rate (ದರಗಳ ಪಟ್ಟಿ) ಬೆಲೆಗೆ ಇರುವ ಮಹತ್ವವೇನು: (ಸಂಪೂರ್ಣ ಮಾಹಿತಿ ನೀಡುವುದು) | Schedule of Rates (ದರಪಟ್ಟಿ) ಯಾವುದೇ ಅಂದಾಜು ಪಟ್ಟಿಯನ್ನು ತಯಾರುಮಾಡಲು ಮಾನದಂಡವಾಗಿರುತ್ತದೆ. ಕಾಮಗಾರಿಗೆ ಬಳಸುವ ಪ್ರತಿ ಐಟಂಗಳ ವಿಶಿಷ್ಠ ವಿವರಣೆಗೆ ಅನುಸಾರವಾಗಿ ಕಾರ್ಮಿಕ ಇಲಾಖೆಯಿಂದ ಕಾರ್ಮಿಕರಿಗೆ ನಿಗಧಿಪಡಿಸಿದ ದರಗಳನ್ನು ಅಳವಡಿಸಿಕೊಂಡು, ಸಿಮೆಂಟ್, ಉಕ್ಕು ಇತರೆ ಸಾಮಗ್ರಿಗಳಿಗೆ ಮಾರುಕಟ್ಟೆ ದರಗಳನ್ನು ಕೊಟೇಷನ್ ಮೂಲಕ ಕಡಿಮೆ ದರಗಳನ್ನು ನಮೂದಿಸಿರುವ ಹಾಗೂ ಬಿಟುಮಿನ್ (ಡಾಂಬರು) ಎಂ.ಆರ್.ಪಿ.ಎಲ್. ನಿಂದ ನಿಗಧಿಪಡಿಸಿದ ದರಗಳನ್ನು ಅಳವಡಿಸಿಕೊಂಡು Schedule of Rates (ದರಪಟ್ಟಿ) ದರ ನಿಗಧಿಪಡಿಸಲಾಗುತ್ತದೆ. ದರಪಟ್ಟಿಯ ದರಗಳ ಆಧಾರದ ಮೇಲೆ ಕಾಮಗಾರಿಯ ಅಂದಾಜುಪಟ್ಟಿಗಳನ್ನು ತಯಾರಿಸಲಾಗುವುದು. |
| ಉ) | ಹಾಗಿದ್ದಲ್ಲಿ, ಕಡಿಮೆ ಮೊತ್ತಕ್ಕೆ ಟೆಂಡರ್ ಕರೆಯುವ ಗುತ್ತಿಗೆದಾರರ ಕೆಲಸದ ಗುಣಮಟ್ಟವನ್ನು ಕಾಪಾಡುವ ಬಗ್ಗೆ ಸರ್ಕಾರ ಅನುಸರಿಸುವ ಮಾನದಂಡಗಳೇನು? (ಸಂಪೂರ್ಣ ಮಾಹಿತಿ ನೀಡುವುದು) | ಟೆಂಡರ್‌ನ ಜನರಲ್ ಕಂಡೀಷನ್ಸ್ ಕಂಡಿಕೆ 29ರ ಉಪಕಂಡಿಕೆ 29.1 ರಲ್ಲಿ " The successful tenderer shall deliver to the employer security deposit in any of the forms given below for an amount equivalent to 5% of the contract price plus **additional security for unbalanced tenders in accordance with clause 25.5 of ITT and clause 44 of condition of contract** " ಇದರಂತೆ ತಾಂತ್ರಿಕವಾಗಿ ಅರ್ಹಗೊಂಡು ಅತಿ ಕಡಿಮೆ ದರಗಳನ್ನು ನಮೂದಿಸಿದ ಗುತ್ತಿಗೆದಾರರಿಂದ ದರಪಟ್ಟಿ ದರಗಳಿಗಿಂತ ಕಡಿಮೆಯಿರುವ ಮೊತ್ತಕ್ಕೆ ಹೆಚ್ಚುವರಿ ಸೆಕ್ಯೂರಿಟಿ ಡೆಪಾಸಿಟ್ ಅನ್ನು ಪಡೆದುಕೊಂಡು ಗುತ್ತಿಗೆ ಕರಾರನ್ನು ಮಾಡಿಕೊಳ್ಳಲಾಗುತ್ತದೆ.<br><br>ಮುಂದುವರೆದು, ಸದರಿ ಗುತ್ತಿಗೆದಾರರು ವಿಶಿಷ್ಠ ವಿವರಣೆಯ ಹಾಗೂ ಗುತ್ತಿಗೆ ಕರಾರಿನ ನಿಯಮಾವಳಿಯಂತೆ ಗುಣಮಟ್ಟದ ಕಾಮಗಾರಿಯನ್ನು ಪೂರ್ಣಗೊಳಿಸಿದ ನಂತರವಷ್ಟೆ ಹೆಚ್ಚುವರಿ ಸೆಕ್ಯೂರಿಟಿ ಡೆಪಾಸಿಟ್ ಮೊತ್ತವನ್ನು ಗುತ್ತಿಗೆದಾರರಿಗೆ ಹಿಂದಿರುಗಿಸಲಾಗುತ್ತದೆ. |

ಲೋಇ 122 ಸಿಕ್ಯೂಎಸ್ 2021(ಇ)

(ಸಿ.ಸಿ. ಪಾಟೀಲ)
ಲೋಕೋಪಯೋಗಿ ಸಚಿವರು